## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1503 |
| 2 | ಸದಸ್ಯರ ಹೆಸರು | : | ಡಾ: ಎಂ.ಜಿ. ಮುಳೆ (ವಿಧಾನಸಭೆ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 20-03-2024 |
| 4 | ಉತ್ತರಿಸುವವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ನಗರ ಫುಟ್‌ಪಾತ್‌ಗಳಲ್ಲಿ ತರಕಾರಿ ವ್ಯಾಪಾರ ಮಾಡುತ್ತಿದ್ದು ಪಾದಚಾರಿಗಳು ಓಡಾಡಲು ತೊಂದರೆಯಾಗುತ್ತಿದ್ದರೂ ಬಿ.ಬಿ.ಎಂ.ಪಿ ಯವರು ಕ್ರಮ ಕೈಗೊಳ್ಳದಿರಲು ಕಾರಣವೇನು:</td><td rowspan="2">ಪಾಲಿಕೆ ವ್ಯಾಪ್ತಿಯಲ್ಲಿ ಫುಟ್‌ಪಾತ್‌ಗಳಲ್ಲಿ ಬೀದಿ ಬದಿ ವ್ಯಾಪಾರಿಗಳು ತರಕಾರಿ ಹಾಗೂ ಇತರೆ ವಸ್ತುಗಳನ್ನು ಮಾರಾಟ ಮಾಡುವುದನ್ನು ತಡೆಯಲು ವಲಯವಾರು ಪೋಲೀಸ್ ಇಲಾಖೆ ಸಹಯೋಗದೊಂದಿಗೆ ಆಗಿಂದ್ದಾಗ್ಗೆ ತೆರವುಗೊಳಿಸಲಾಗುತ್ತಿರುತ್ತದೆ. ಅಲ್ಲದೆ, ಇದಕ್ಕೆ ಕಡಿವಾಣ ಹಾಕುವ ಸಲುವಾಗಿ ಹಲವು ರಸ್ತೆಗಳಲ್ಲಿ ಬೀದಿ ಬದಿ ವ್ಯಾಪಾರ ವಲಯಗಳನ್ನು ಗುರುತಿಸಿ ವ್ಯಾಪಾರ ನಡೆಸಲು ಕ್ರಮವಹಿಸಲಾಗುತ್ತಿರುತ್ತದೆ.</td></tr>
<tr><td>ಆ)</td><td>ಫುಟ್‌ಪಾತ್ ಮಾತ್ರವಲ್ಲದೆ ರಸ್ತೆಯ ಎರಡೂ ಬದಿಗಳಲ್ಲಿ ತಳ್ಳುಗಾಡಿಗಳನ್ನಿಟ್ಟುಕೊಂಡು ವ್ಯಾಪಾರ ಮಾಡುತ್ತಾ ಜನ ಓಡಾಡಲು ಮತ್ತು ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು:</td></tr>
<tr><td>ಇ)</td><td>ಈ ವಿಚಾರವನ್ನು ಗಂಭೀರವಾಗಿ ಪರಿಶೀಲಿಸಿ ಫುಟ್‌ಪಾತ್ ಮತ್ತು ರಸ್ತೆ ಬದಿಗಳಲ್ಲಿ ವ್ಯಾಪಾರ ಮಾಡುವುದನ್ನು ತಪ್ಪಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದೇ?</td><td>ಬೀದಿ ಬದಿ ವ್ಯಾಪಾರಿಗಳ ರಕ್ಷಣೆ ಹಾಗೂ ಜೀವನೋಪಾಯ ಗಮನದಲ್ಲಿರಿಸಿಕೊಂಡು ಆಯ್ದು ರಸ್ತೆಗಳಲ್ಲಿ vendor zone ಗಳನ್ನು ಗುರುತಿಸಿ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಲು ಅನುವು ಮಾಡಿಕೊಡಲು ಯೋಜನೆ ರೂಪಿಸಲಾಗುತ್ತಿದ್ದು, ಕಾರ್ಯರೂಪಗೊಂಡ ನಂತರ ಬೀದಿ ಬದಿ ವ್ಯಾಪಾರವನ್ನು ಇನ್ನಷ್ಟೂ ಪರಿಣಾಮಕಾರಿಯಾಗಿ ತಡೆಗಟ್ಟಲು ಸಾಧ್ಯವಾಗುತ್ತದೆ.</td></tr>
</table>

**ಸಂಖ್ಯೆ: ನಅಇ 132 ಬಿಬಿಎಸ್ 2025(ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ



e No. UDD/132/BBL/2025-BBMP2-Urban Development Department (Computer No. 1720674)
nerated from eOffice by RAGHU D B, UDD-SA(RDB), SENIOR ASSISTANT, URBAN DEVELOPMENT DEPARTMENT